**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**ಪಿ.ಸಿ.ಆರ್. 18/2026**

**ಸಾಕ್ಷಿಯನ್ನು ದಿನಾಂಕಃ 07.03.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಭಾರತೀಯ ನಾಗರೀಕ ಸುರಕ್ಷಾ ಸಂಹಿತ ಕಲಂ 223 ರಡಿಯಲ್ಲಿ ನೀಡಿದ ಹೇಳಿಕೆಃ**

**ಪಿರ್ಯಾದುದಾರರ ಪರ ಶ್ರೀ. ಎಂ.ಡಿ. ವಕೀಲರಿಂದಃ**

ನನ್ನ ಹೇಳಿಕೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದನ್ನು ನನ್ನ ಮಾಹಿತಿಯ ಮೇರೆಗೆ ನನ್ನ ವಕೀಲರು ತಯಾರಿಸಿದ್ದು ಅದರಲ್ಲಿರುವ ಸಂಗತಿಗಳು ಸತ್ಯವಾಗಿರುತ್ತವೆ. ಅದಕ್ಕೆ ನಾನು ನನ್ನ ಸಹಿಗಳನ್ನು ಹಾಕಿರುತ್ತೇನೆ. ಈ ಕೆಳಗಿನ ದಾಖಲೆಗಳನ್ನು ನಿಶಾನೆಗಳಾಗಿ ಹಾಜರುಪಡಿಸಿರುತ್ತೇನೆ.

ಆರೋಪಿ ನೀಡಿದ ಚೆಕ್ ನ್ನು **ನಿ.ಪಿ.-1** ಎಂದು, ಆರೋಪಿಯ ಸಹಿಯನ್ನು **ನಿ.ಪಿ.-1(ಎ)** ಎಂದು, ಬ್ಯಾಂಕ್‌ನವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-2** ಎಂದು, ಆರೋಪಿಗೆ ವಕೀಲರ ಮುಖಾಂತರ ನೀಡಿದ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-3** ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-4** ಎಂದು, ಸದರಿ ನೋಟೀಸ್ 'Addressee left without instructions' ಎಂಬ ಷರಾದೊಂದಿಗೆ ಹಿಂತಿರುಗಿ ಬಂದಿದ್ದು, ಸದರಿ ನೋಟೀಸ್ ನ ಅಂಚೆ ಲಕೋಟೆಯನ್ನು **ನಿ.ಪಿ.-5** ಎಂದು, ಸದರಿ ಲಕೋಟೆಯನ್ನು ತೆರೆದು ನೋಡಲಾಗಿ, ಅದರಲ್ಲಿ ನೋಟೀಸ್ ನ ಪ್ರತಿ ಇದ್ದು, ಅದನ್ನು **ನಿ.ಪಿ.-5(ಎ)** ಎಂದು ಗುರುತಿಸಲಾಯಿತು.

ಆದ್ದರಿಂದ ಆರೋಪಿಯ ವಿರುದ್ಧ ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಪ್ರಾರ್ಥನೆ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿಜೆ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**